ಕರ್ನಾಟಕ ಸರ್ಕಾರ

(ಕೃಷಿ ಇಲಾಖೆ)

ಸಂಖ್ಯೆ: ಕೃಸಿಪ-5/ತಾಂ.ಅ/ಬದಲಿವ್ಯವಸ್ಥೆ/2014-15

ಕೃಷಿ ಆಯುಕ್ತರ ಕಾರ್ಯಾಲಯ,
ಶೇಷಾದ್ರಿ ರಸ್ತೆ, ಬೆಂಗಳೂರು-1,
ದಿನಾಂಕ: 23.01.2015.

## ಸುತ್ತೋಲೆ

ವಿಷಯ:- ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ತಾಂತ್ರಿಕ ಅಧಿಕಾರಿಗಳು ಕ್ಷೇತ್ರ ಮಟ್ಟದ ಕಛೇರಿಗಳಲ್ಲಿ ಕಾರ್ಯ-ನಿರ್ವಹಿಸುವಂತೆ ಸೂಕ್ತ ವ್ಯವಸ್ಥೆ ಮಾಡುವ ಬಗ್ಗೆ.

*******

ವಿಷಯಕ್ಕೆ ಸಂಬಂಧಿಸಿದಂತೆ, ಅನೇಕ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಲ್ಲಿ ತಾಂತ್ರಿಕ ಅಧಿಕಾರಿಗಳು 3 ವರ್ಷಗಳಿಗಿಂತಲೂ ಹೆಚ್ಚಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇವರುಗಳು ಕ್ಷೇತ್ರ ಮಟ್ಟದಲ್ಲಿ ಕೆಲಸ ನಿರ್ವಹಿಸದೇ ಇರುವುದರಿಂದ ಕ್ಷೇತ್ರ ಮಟ್ಟದ ಸಮಸ್ಯೆಗಳ ಸಮಯೋಚಿತ ನಿರ್ಧಾರಗಳನ್ನು ಕೈಗೊಳ್ಳಲು ಅನುಭವದ ಕೊರತೆಯಿಂದ ಯೋಜನೆಗಳ ಅನುಷ್ಠಾನದಲ್ಲಿ ಅಡಚಣೆಗಳು ಹಾಗೂ ಕೊರತೆಗಳು ಇಲಾಖೆಯ ಗಮನಕ್ಕೆ ಕಂಡುಬಂದಿರುತ್ತದೆ.

ಸದರಿ ತಾಂತ್ರಿಕ ಅಧಿಕಾರಿಗಳು ಕೃಷಿ ಪರಿಕರಗಳು/ಯಾಂತ್ರೀಕರಣ ಹಾಗೂ ಇಲಾಖೆಯ ಇತರ ರಿಯಾಯ್ತಿ ಯೋಜನೆಗಳಲ್ಲಿ ಹೆಚ್ಚಿನ ಆಸಕ್ತಿ ವಹಿಸಿ ಸಹಾಯಕ ಕೃಷಿ ನಿರ್ದೇಶಕರ ಗಮನಕ್ಕೆ ತಾರದೆಯೇ ಅನುಷ್ಠಾನಗೊಳಿಸುತ್ತಿರುವುದು ಸಹ ಗಮನಕ್ಕೆ ಬಂದಿರುತ್ತದೆ. ಇವರುಗಳ ವಿರುದ್ಧ ಸಾರ್ವಜನಿಕರಿಂದ ಆರೋಪಗಳು ಕೇಳಿಬರುತ್ತಿರುವ ಹಿನ್ನೆಲೆಯಲ್ಲಿ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಲ್ಲಿ 3 ವರ್ಷಗಳಿಗೆ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ತಾಂತ್ರಿಕ ಅಧಿಕಾರಿಗಳನ್ನು ಕ್ಷೇತ್ರ ಮಟ್ಟದ ರೈತ ಸಂಪರ್ಕ ಕೇಂದ್ರಗಳಿಗೆ (ಕಸಬಾ ರೈತ ಸಂಪರ್ಕ ಕೇಂದ್ರ ಹೊರತಾಗಿ) ಸಾರ್ವಜನಿಕ ಹಿತದೃಷ್ಟಿಯಿಂದ ಕಾರ್ಯನಿರ್ವಹಣೆ ಮೇಲೆ ದಿನಾಂಕ: 31.01.2015 ರೊಳಗಾಗಿ ಸೂಕ್ತ ವ್ಯವಸ್ಥೆ ಮಾಡಿ ಇಲಾಖೆಗೆ ಮಾಹಿತಿ ನೀಡಲು ಸೂಚಿಸಿದೆ.

(ಟಿಪ್ಪಣಿ ಕೃಷಿ ಆಯುಕ್ತರಿಂದ
ಅನುಮೋದಿಸಲ್ಪಟ್ಟಿದೆ)

ಅಪರ ನಿರ್ದೇಶಕರು(ಆಡಳಿತ)

ಪ್ರತಿಯನ್ನು ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರುಗಳಿಗೆ